# ಕರ್ನಾಟಕ ಸರ್ಕಾರದ ನಡವಳಿಗಳು

411

**ವಿಷಯ:** ಜಲಾನಯನ ಅಬಿವೃದ್ಧಿ ಇಲಾಖೆಯ ಅರಣ್ಯ ಸಂರಕ್ಷಣಾಧಿಕಾರಿಗಳ ಹುದ್ದೆಯನ್ನು ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳ ಹುದ್ದೆಗೆ ಉನ್ನತೀಕರಿಸುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಕೃತೋಇ 40 ಕೃಯೋಕಾ 2010, ದಿನಾಂಕ: 1.4.2011.
2. ಸರ್ಕಾರದ ಅಧಿಸೂಚನೆ ಸಂ: ಸಿಆಸುಇ 39 ಎಸ್‌ಎಫ್‌ಪಿ 2011, ದಿನಾಂಕ: 4.7.2011.
3. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ ರವರ ಪತ್ರ ಸಂ: ಜಅಇ/ಆಡಳಿತ.4/ವಿನಿ.3/ವಿವ.8/2011-12, ದಿನಾಂಕ: 16.11.2011.

*********

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ: (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಜಲಾನಯನ ಅಭಿವೃದ್ಧಿ ಇಲಾಖೆಯ ಕೇಂದ್ರ ಕಚೇರಿಗೆ ಒಂದು ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮತ್ತು ಒಂದು ಅರಣ್ಯ ಸಂರಕ್ಷಣಾಧಿಕಾರಿ ಹುದ್ದೆಗಳನ್ನು ಮಾತ್ರ 2011-12 ನೇ ಸಾಲಿನಲ್ಲಿ ಮುಂದುವರೆಸುವ ಬಗ್ಗೆ ಆದೇಶ ಹೊರಡಿಸಲಾಗಿದೆ. ಮೇಲೆ ಕ್ರಮಾಂಕ (2)ರಲ್ಲಿ ಓದಲಾದ ಸರ್ಕಾರದ ಅಧಿಸೂಚನೆಯಲ್ಲಿ ಶ್ರೀ ನಾಗರಾಜ, ಭಾ.ಅ.ಸೇ., ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಯವರನ್ನು ಜಲಾನಯನ ಅಭಿವೃದ್ಧಿ ಇಲಾಖೆಗೆ ವರ್ಗಾಯಿಸಲಾಗಿದೆ. ಸದರಿ ಹುದ್ದೆಯು ಅರಣ್ಯ ಸಂರಕ್ಷಣಾಧಿಕಾರಿ ಹುದ್ದೆಯಾಗಿದ್ದು ಅದನ್ನು ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಹುದ್ದೆಗೆ ಉನ್ನತೀಕರಿಸಿ ಆದೇಶ ಹೊರಡಿಸುವಂತೆ ಕ್ರಮಾಂಕ (3)ರಲ್ಲಿ ಓದಲಾದ ಪತ್ರದಲ್ಲಿ ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ ರವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ. ಪ್ರಸ್ತಾವನೆ ಪರಿಶೀಲಿಸಿ ಅರಣ್ಯ ಸಂರಕ್ಷಣಾಧಿಕಾರಿ ಹುದ್ದೆಯನ್ನು ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿಗಳು ಸದರಿ ಹುದ್ದೆಯಲ್ಲಿ ಇರುವವರೆಗೆ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಹುದ್ದೆಗೆ ಉನ್ನತೀಕರಿಸಲು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 221 ಕೃಪಸೇ 2011 ಬೆಂಗಳೂರು, ದಿನಾಂಕ: 29/05/2012**

ಪ್ರಸ್ತಾವನೆಯಲ್ಲಿ ವಿವರಿಸಲಾದ ಕಾರಣಗಳ ಹಿನ್ನೆಲೆಯಲ್ಲಿ ಸರ್ಕಾರವು ಪ್ರಸ್ತುತ ಜಲಾನಯನ ಅಭಿವೃದ್ಧಿ ಇಲಾಖೆ ಕೇಂದ್ರ ಕಚೇರಿ, ಬೆಂಗಳೂರು ಇಲ್ಲಿ ಇರುವ ಅರಣ್ಯ ಸಂರಕ್ಷಣಾಧಿಕಾರಿ ಹುದ್ದೆಯನ್ನು ಹಾಲಿ ಕಾರ್ಯ ನಿರ್ವಹಿಸುತ್ತಿರುವ ಶ್ರೀ ನಾಗರಾಜ, ಭಾ.ಅ.ಸೇ., ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಇವರು ಸದರಿ ಹುದ್ದೆಯಲ್ಲಿ ಕಾರ್ಯನಿರ್ವಹಿಸುವವರೆಗೆ ಅಥವಾ ಮುಂದಿನ ಆದೇಶದವರೆಗೆ

13

ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅರಣ್ಯ ಸಂರಕ್ಷಣಾಧಿಕಾರಿ ಹುದ್ದೆಯನ್ನು ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಹುದ್ದೆಗೆ ಉನ್ನತೀಕರಿಸಿ ಆದೇಶಿಸಿದೆ.

ಈ ಆದೇಶವನ್ನು ಸಿಆಸುಇ 71 ಎಸ್‌ಎಫ್‌ಪಿ 2012, ದಿನಾಂಕ: 24.5.2012 ರಲ್ಲಿ ಪಡೆದ ಸಹಮತಿಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ.

29/5/12
(ಮಂಜುನಾಥ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ.

ಇವರಿಗೆ:-

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ.
3) ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು.
4) ಸಂಬಂಧಿಸಿದ ಅಧಿಕಾರಿಗಳು (ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು ಇವರ ಮೂಲಕ).
5) ಸರ್ಕಾರದ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಇವರ ಆಪ್ತ ಕಾರ್ಯದರ್ಶಿ.
6) ಸರ್ಕಾರದ ಉಪ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಇವರ ಆಪ್ತ ಸಹಾಯಕರು.
7) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.